ಹಣಕಾಸು ನಿಯಂತ್ರಣಾಧಿಕಾರಿಗಳ ಕಛೇರಿ
ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು

ಸಂಖ್ಯೆ ಹನಿಅ/ವಿಭಾಗ-2/ತುಟ್ಟಿಭತ್ಯೆ-ಬೋಧಕ ಹಾಗೂ ಟಿ ಶ್ರೇಣಿಯ/2025-26 ದಿನಾಂಕ 21/05/2025

:::: ಸುತ್ತೋಲೆ – 4 ::::

ವಿಷಯ:- ಬೋಧಕ ಹಾಗೂ ಟಿ ಶ್ರೇಣಿಯ ಸಿಬ್ಬಂದಿಗಳಿಗೆ ತುಟ್ಟಿಭತ್ಯೆಯ ದರಗಳ ಪರಿಷ್ಕರಿಸುವ ಕುರಿತು.

ಉಲ್ಲೇಖ:- 1. ಸರ್ಕಾರಿ ಅದೇಶ ಸಂಖ್ಯೆ ಆಇ 10 ಎಸ್‌ಆರ್‌ಪಿ 2025 ಬೆಂಗಳೂರು, ದಿನಾಂಕ 8ನೇ ಮೇ 2025.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 21-05-2025.

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ಸರ್ಕಾರಿ ಆದೇಶ ಸಂಖ್ಯೆ: ಆಇ 10 ಎಸ್‌ಆರ್‌ಪಿ 2025 ಬೆಂಗಳೂರು, ದಿನಾಂಕ 8ನೇ ಮೇ 2025 ರಲ್ಲಿ ಮಂಜೂರು ಮಾಡಿರುವ ತುಟ್ಟಿಭತ್ಯೆ ದರವನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಬೋಧಕ ಹಾಗೂ ಟಿ ಶ್ರೇಣಿಯ ಸಿಬ್ಬಂದಿ ವರ್ಗದವರಿಗೆ ದಿನಾಂಕ 01-01-2025 ರಿಂದ ಜಾರಿಗೆ ಬರುವಂತೆ ಯಥಾವತ್ತಾಗಿ ಅಳವಡಿಸಿಕೊಳ್ಳಲಾಗಿದೆ.

ಹಣಕಾಸು ನಿಯಂತ್ರಣಾಧಿಕಾರಿಗಳು

ಪ್ರತಿಗಳು:

1. ಕೃಷಿ ವಿಶ್ವವಿದ್ಯಾಲಯದ ಎಲ್ಲಾ ಅಧಿಕಾರಿಗಳಿಗೆ.
2. ಕೃಷಿ ವಿಶ್ವವಿದ್ಯಾಲಯದ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ
3. ಉಪ ಹಣಕಾಸು ನಿಯಂತ್ರಣಾಧಿಕಾರಿಗಳು / ಸಹಾಯಕ ಹಣಕಾಸು ನಿಯಂತ್ರಣಾಧಿಕಾರಿಗಳು, ಹಣಕಾಸು ನಿಯಂತ್ರಣಾಧಿಕಾರಿಗಳ ಕಛೇರಿ, ಜಿಕೆವಿಕೆ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳಿಗೆ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

ಓದಲಾಗಿದೆ:- 1. ಸ.ಆ. ಸಂಖ್ಯೆ: ಆಇ 3 ಎಸ್‌ಆರ್‌ಪಿ 2019 ದಿನಾಂಕ:15.05.2019.
2. ಸ.ಆ. ಸಂಖ್ಯೆ: ಆಇ 16 ಎಸ್‌ಆರ್‌ಪಿ 2019 ದಿನಾಂಕ: 25.10.2019.
3. ಸ.ಆ. ಸಂಖ್ಯೆ: ಆಇ 10 ಎಸ್‌ಆರ್‌ಪಿ 2020 ದಿನಾಂಕ: 05.05.2020.
4. ಸ.ಆ. ಸಂಖ್ಯೆ: ಆಇ 19 ಎಸ್‌ಆರ್‌ಪಿ 2021 ದಿನಾಂಕ: 29.07.2021.
5. ಸ.ಆ. ಸಂಖ್ಯೆ: ಆಇ 31 ಎಸ್‌ಆರ್‌ಪಿ 2021 ದಿನಾಂಕ: 27.10.2021.
6. ಸ.ಆ. ಸಂಖ್ಯೆ: ಆಇ 23 ಎಸ್‌ಆರ್‌ಪಿ 2022 ದಿನಾಂಕ: 11.04.2022
7. ಸ.ಆ. ಸಂಖ್ಯೆ: ಆಇ 41 ಎಸ್‌ಆರ್‌ಪಿ 2022 ದಿನಾಂಕ: 12.10.2022
8. ಸ.ಆ. ಸಂಖ್ಯೆ: ಆಇ 10 ಎಸ್‌ಆರ್‌ಪಿ 2023 ದಿನಾಂಕ: 31.05.2023
9. ಸ.ಆ. ಸಂಖ್ಯೆ: ಆಇ 21 ಎಸ್‌ಆರ್‌ಪಿ 2023 ದಿನಾಂಕ: 26.10.2023
10. ಸ.ಆ. ಸಂಖ್ಯೆ: ಆಇ 19 ಎಸ್‌ಆರ್‌ಪಿ 2024 ದಿನಾಂಕ: 14.03.2024
11. ಸ.ಆ. ಸಂಖ್ಯೆ: ಆಇ 45 ಎಸ್‌ಆರ್‌ಪಿ 2024 ದಿನಾಂಕ: 28.11.2024
12. ಭಾರತ ಸರ್ಕಾರದ ದಿನಾಂಕ:02.04.2025ರ ಅಧಿಕೃತ ಜ್ಞಾಪನ ಸಂಖ್ಯೆ:1/1(1)/2025-E.II (B).

---

**ಸರ್ಕಾರಿ ಆದೇಶ ಸಂಖ್ಯೆ: ಆಇ 10 ಎಸ್‌ಆರ್‌ಪಿ 2025**
**ಬೆಂಗಳೂರು, ದಿನಾಂಕ: 8ನೇ ಮೇ 2025**

2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ **ಶೇಕಡ 53 ರಿಂದ ಶೇಕಡ 55ಕ್ಕೆ 1ನೇ ಜನವರಿ 2025** ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಎಂದರೆ ಸರ್ಕಾರಿ ನೌಕರನು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಪಡೆಯುತ್ತಿರುವ ವೇತನ.

3. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳು, ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳು, ಸರ್ಕಾರಿ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಪೂರ್ಣಕಾಲಿಕ ನೌಕರರಿಗೆ ಈ ಆದೇಶಗಳು ಅನ್ವಯಿಸುತ್ತವೆ.

4. ವೇತನ ಎಂದು ಪರಿಗಣಿಸಲ್ಪಡದ ಯಾವುದೇ ಉಪಲಬ್ಧಗಳನ್ನು ಮೂಲ ವೇತನಕ್ಕೆ ಸೇರಿಸತಕ್ಕದ್ದಲ್ಲ.

5. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

6. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳ ನಿವೃತ್ತ ನೌಕರರಿಗೆ ಈ ಆದೇಶಗಳು ಅನ್ವಯಿಸುವುದಿಲ್ಲ.

7. ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು 2025ರ ಮೇ ಮಾಹೆಯ ವೇತನ ಬಟವಾಡೆಗೂ ಮೊದಲು ಪಾವತಿ ಮಾಡತಕ್ಕದ್ದಲ್ಲ.

8. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

9. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Uma K
(ಉಮಾ.ಕೆ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.